# ಸಾರ್ವಜನಿಕ ಆರೋಗ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 10-09-2015ರ ನಡವಳಿಗಳು

## ವಿಷಯದ ಸಂಖ್ಯೆ : 196 / 2015-16

ವಿಷಯ: **ಎಸ್.ಬಿ.ಬಿಂಗಿಪುರ ಸರ್ವೆ ನಂ.179ರ ಘನತ್ಯಾಜ್ಯ ವಿಲೇವಾರಿ ಘಟಕದ ಪಶ್ಚಿಮ ಭಾಗದಲ್ಲಿ ಆರ್.ಸಿ.ಸಿ ತಡೆಗೋಡೆ ನಿರ್ಮಾಣ ಕಾಮಗಾರಿ ಬಗ್ಗೆ**

ಪ್ರಸ್ತಾವನೆ:

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಎಸ್.ಬಿ.ಬಿಂಗಿಪುರ ಸರ್ವೆ ನಂ.179 ರಲ್ಲಿ ಪಾಲಿಕೆಯಿಂದ ಘನತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದ್ದು, ಹೆಚ್ಚಿನ ಮಳೆಯ ಕಾರಣದಿಂದ ಶೇಖರಣೆಗೊಂಡಿರುವ ಲಿಚೇಟ್ ತುಂಬಿ ಕೆರೆಗೆ ಹರಿದಿದ್ದು, ಅಲ್ಲಿನ ಮೀನುಗಳು ಸತ್ತಿರುತ್ತವೆ. ಸದರಿ ಘಟಕದಲ್ಲಿರುವ ಲಿಚೇಟ್ ಹರಿಯುವುದನ್ನು ತಡೆಯಲು ಆರ್.ಸಿ.ಸಿ ತಡೆಗೋಡೆಯನ್ನು ನಿರ್ಮಿಸಲು ದಿನಾಂಕ:21-05-2015 ರಂದು ಮಾನ್ಯ ಆಯುಕ್ತರು ಹಾಗೂ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರು ಸ್ಥಳ ಪರಿವೀಕ್ಷಣೆ ಸಂದರ್ಭದಲ್ಲಿ ಸದರಿ ಕಾಮಗಾರಿಯನ್ನು ಕೈಗೊಳ್ಳಲು ಆದೇಶಿಸಿರುತ್ತಾರೆ. ಅದರಂತೆ ಶೇಖರಣೆಯಾಗಿರುವ ಲಿಚೇಟ್ ಕೆರೆಗೆ ಹರಿಯುವುದನ್ನು ತಡೆಯಲು ಬಂಡ್ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲು ರೂ.99.00 ಲಕ್ಷಗಳ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ.

| ಕ್ರ.ಸಂ. | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 01 | Construction of RCC Retaining Wall on East Side of Solid Waste Landfill Site S Bingipura Sy No. 179 | 99.00 |
| **Total** | | **99.00** |

ಮೇಲಿನ ಕಾಮಗಾರಿಯನ್ನು ಅಂದಾಜು ಮೊತ್ತ ರೂ.99.00 ಲಕ್ಷಗಳಿಗೆ ಪಾಲಿಕೆಯ 2015-16ನೇ ಸಾಲಿನ ಲೆಕ್ಕ ಶೀರ್ಷಿಕೆ ಪಿ-2200, **"14ನೇ ಹಣಕಾಸು ಅನುದಾನದಡಿಯಲ್ಲಿ ಘನತ್ಯಾಜ್ಯ ವಸ್ತುಗಳ ನಿರ್ವಹಣೆ ಕಾಮಗಾರಿಗಳ'** ಶೀರ್ಷಿಕೆಯಡಿಯಲ್ಲಿ ಭರಿಸಬಹುದಾಗಿರುತ್ತದೆ. ಸದರಿ ಕಾಮಗಾರಿಯನ್ನು ಶೀಘ್ರವಾಗಿ ಕೈಗೊಳ್ಳಬೇಕಾಗಿರುವುದರಿಂದ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರು ಸೂಚಿಸಿರುವ ಮೇರೆಗೆ ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸಲು ಅನುಮೋದನೆ ಹಾಗೂ ಸದರಿ ಕಾಮಗಾರಿಯ ಅಂದಾಜು ಮೊತ್ತಕ್ಕೆ ಜಾಬ್ ಸಂಖ್ಯೆ, ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಅನುಮೋದನೆ ನೀಡಲು ಕೋರಿ ಕಡತವನ್ನು ಮಂಡಿಸಿದೆ.

ಮೇಲ್ಕಂಡ ಅಂಶಗಳನ್ನು ತಮ್ಮ ಅವಗಾಹನೆಗೆ ತರುತ್ತಾ, ಈ ಕೆಳಕಂಡ ಅಂಶಗಳಿಗೆ ಅನುಮೋದನೆ ಕೋರಿ ಕಡತವನ್ನು ಮರು ಮಂಡಿಸಿದೆ.

1. ಸದರಿ ಕಾಮಗಾರಿಯ ಮೊತ್ತ ರೂ.99.00 ಲಕ್ಷಗಳ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು
2. ಸದರಿ ಕಾಮಗಾರಿಗೆ ಅನುದಾನವನ್ನು ಪಿ-2200, **"14ನೇ ಹಣಕಾಸು ಅನುದಾನದಡಿಯಲ್ಲಿ ಘನತ್ಯಾಜ್ಯ ವಸ್ತುಗಳ ನಿರ್ವಹಣೆ ಕಾಮಗಾರಿಗಳ'** ಶೀರ್ಷಿಕೆಯಲ್ಲಿ ಜಾಬ್ ಕೋಡ್ ನೀಡಲು.

...............................2

ಮೇಲ್ಕಂಡ ಎಲ್ಲಾ ಅಂಶಗಳನ್ನು ತಮ್ಮ ಅವಗಾಹನೆಗೆ ತರುತ್ತಾ, ಸದರಿ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ, ಜಾಬ್ ಕೋಡ್ ನೀಡಲು ಹಾಗೂ ಸದರಿ ಕಾಮಗಾರಿಯನ್ನು ಅತಿ ತುರ್ತಾಗಿ ನಿರ್ವಹಿಸಬೇಕಾಗಿರುವುದರಿಂದ ಮೆ॥ಕೆ.ಆರ್.ಐ.ಡಿ.ಎಲ್ ಸಂಸ್ಥೆ ಮುಖಾಂತರ ನಿರ್ವಹಿಸುವ ಬಗ್ಗೆ ಅನುಮೋದನೆ ಕೋರಿ ಮಾನ್ಯ ಆಡಳಿತಾಧಿಕಾರಿಗಾರರ ಮುಂದೆ ಮಂಡಿಸಿರುವ ಮಾನ್ಯ ಆಯುಕ್ತರವರ ದಿನಾಂಕ: 20-07-2015ರ ಟಿಪ್ಪಣಿ.

**<u>ತೀರ್ಮಾನ</u>: "ಅನುಮೋದಿಸಿದೆ".**

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು